# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1614 |
| 2. | ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 18-03-2021 |
| 4. | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬಿ.ಬಿ.ಎಂ.ಪಿ., ವ್ಯಾಪ್ತಿಯ ಕೆಲವು ಕಡೆಗಳಲ್ಲಿ ಮುಖ್ಯರಸ್ತೆಯ ಹಿಂಭಾಗದಲ್ಲಿರುವ ಸಣ್ಣ ಸಣ್ಣ ರಸ್ತೆಗಳಿಗೆ ಕಬ್ಬಿಣದ ಗೇಟುಗಳನ್ನು ಅಳವಡಿಸಿ ರಾತ್ರಿ ವೇಳೆ ಬೀಗ ಹಾಕುತ್ತಿರುವ ಬಗ್ಗೆ ಪರಿಶೀಲಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ 07.12.2020 ರಂದು ಬಿ.ಬಿ.ಎಂ.ಪಿ., ಆಯುಕ್ತರಿಗೆ ನಿರ್ದೇಶನ ನೀಡಲಾಗಿದೆ ಎಂದು ಈ ಹಿಂದೆ ಉತ್ತರದಲ್ಲಿ ತಿಳಿಸಿದ್ದು ಈ ಬಗ್ಗೆ ಆಯುಕ್ತರು ಈ ಕುರಿತು ವರದಿ ಸಲ್ಲಿಸಿರುತ್ತಾರೆಯೇ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಮಹದೇವಪುರ ವಲಯ, ದಾಸರಹಳ್ಳಿ ವಲಯ, ರಾಜರಾಜೇಶ್ವರಿನಗರ ವಲಯ, ಬೊಮ್ಮನಹಳ್ಳಿ ವಲಯ, ಯಲಹಂಕ ವಲಯ, ಪೂರ್ವ ವಲಯ ಮತ್ತು ಪಶ್ಚಿಮ ವಲಯಗಳಲ್ಲಿ ಇಂತಹ ಯಾವುದೇ ಪ್ರಕರಣಗಳು ಇರುವುದಿಲ್ಲ.<br><br>ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ದಕ್ಷಿಣ ವಲಯದ ಚಿಕ್ಕಪೇಟೆ ವಿಭಾಗದ ವಾರ್ಡ್ ಸಂಖ್ಯೆ: 142 ರಲ್ಲಿ 12 ಮತ್ತು 143 ರಲ್ಲಿ 10 ಗೇಟ್‌ಗಳು ಹೀಗೆ ಒಟ್ಟು 22 ಗೇಟುಗಳನ್ನು ಅಳವಡಿಸಲಾಗಿದ್ದು, ಸದರಿ ವಿಭಾಗದ ಸಣ್ಣ ಸಣ್ಣ ರಸ್ತೆಗಳಲ್ಲಿ (ಕನ್ಸರ್ವೆನ್ಸಿ ಜಾಗ) ಸಾರ್ವಜನಿಕರು ಮಲಮೂತ್ರ ವಿಸರ್ಜನೆ ಹಾಗೂ ಇನ್ನಿತರೆ ಅನೈತಿಕ ಚಟುವಟಿಕೆಗಳನ್ನು ತಡೆಗಟ್ಟುವ ಸಲುವಾಗಿ ತಾತ್ಕಾಲಿಕವಾಗಿ ಕಬ್ಬಿಣದ ಗೇಟ್‌ಗಳನ್ನು ಅಳವಡಿಸಿಕೊಂಡಿರುವುದು ಕಂಡುಬಂದಿರುತ್ತದೆ. ಕನ್ಸರ್ವೆನ್ಸಿ ಜಾಗದಲ್ಲಿ ಕೇವಲ ಒಳಚರಂಡಿ, ನೀರಿನ ಸಂಪರ್ಕ, ವಿದ್ಯುತ್ ಸಂಪರ್ಕ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಅಳವಡಿಸಿಕೊಳ್ಳಲು ಮಾತ್ರ ಅವಕಾಶವಿರುತ್ತದೆ. ಯಾವುದೇ ಸಾರ್ವಜನಿಕರ ಓಡಾಟಕ್ಕಾಗಲೀ, ವಾಹನ ಓಡಾಟಕ್ಕಾಗಲೀ ಬಳಕೆಯಾಗುತ್ತಿರುವುದಿಲ್ಲ. ರಾತ್ರಿಯ ಸಮಯದಲ್ಲಿ ಮಲಮೂತ್ರ ವಿಸರ್ಜನೆ ಹಾಗೂ ಇನ್ನಿತರೆ ಅನೈತಿಕ ಚಟುವಟಿಕೆಗಳನ್ನು ತಡೆಗಟ್ಟುವ ಸಲುವಾಗಿ ಸ್ಥಳೀಯ ಸಾರ್ವಜನಿಕರ ಕೋರಿಕೆಯ ಮೇರೆಗೆ, ಸ್ಥಳೀಯರ ಸುರಕ್ಷತೆಯ ಹಿತದೃಷ್ಟಿಯಿಂದ ಸದರಿ ಕನ್ಸರ್ವೆನ್ಸಿ ಜಾಗದಲ್ಲಿನ ಗೇಟುಗಳನ್ನು ತೆರವುಗೊಳಿಸಿರುವುದಿಲ್ಲ. |
| ಆ | ಈಗಲೂ ಕಬ್ಬಿಣದ ಗೇಟುಗಳನ್ನು ತೆರವುಗೊಳಿಸದಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ; | |

. . .2/-

| | | |
|---|---|---|
| | | ಬಿ.ಟಿ.ಎಂ ಲೇಔಟ್ ವಿಭಾಗ ವಾರ್ಡ್ ಸಂಖ್ಯೆ: 148 ರಲ್ಲಿ 01 ಗೇಟ್‌ನ್ನು ಈ ಹಿಂದೆ ನ್ಯಾಷನಲ್ ಗೇಮ್ಸ್ ವಿಲೇಜ್ (ಎನ್.ಜಿ.ವಿ.) ಪ್ರದೇಶದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ಅಳವಡಿಸಲಾಗಿದ್ದು, ಬಿ.ಬಿ.ಎಂ.ಪಿ ವತಿಯಿಂದ ಸದರಿ ಗೇಟನ್ನು ತೆರೆದು ಸಾರ್ವಜನಿಕರ ಹಾಗೂ ವಾಹನ ಸಂಚಾರಕ್ಕೆ ಅವಕಾಶ ನೀಡಲಾಗಿರುತ್ತದೆ. ಎನ್.ಜಿ.ವಿ ಪ್ರದೇಶದ ಮತ್ತು ಗೇಟನ್ನು ಕರ್ನಾಟಕ ಗೃಹ ಮಂಡಳಿ ವತಿಯಿಂದಲೇ ನಿರ್ವಹಣೆ ಮಾಡಲಾಗುತ್ತಿದೆ. |
| ಇ | ಬಿ.ಬಿ.ಎಂ.ಪಿ., ಯವರು ಅಳವಡಿಸಿದಿದ್ದರೆ ಖಾಸಗಿಯವರು ಯಾರು ಅಳವಡಿಸಿದ್ದಾರೆಂಬುದನ್ನು ಪತ್ತೆ ಹಚ್ಚಿ ತೆರವುಗೊಳಿಸಲು ಕ್ರಮ ಕೈಗೊಂಡು ಸಾರ್ವಜನಿಕರಿಗೆ ರಸ್ತೆಯನ್ನು ಮುಕ್ತಗೊಳಿಸಲಾಗುವುದೇ? | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಮಹದೇವಪುರ ವಲಯ, ದಾಸರಹಳ್ಳಿ ವಲಯ, ರಾಜರಾಜೇಶ್ವರಿನಗರ ವಲಯ, ಬೊಮ್ಮನಹಳ್ಳಿ ವಲಯ, ಯಲಹಂಕ ವಲಯ, ಪೂರ್ವ ವಲಯ ಮತ್ತು ಪಶ್ಚಿಮ ವಲಯ ಇಂತಹ ಯಾವುದೇ ಪ್ರಕರಣಗಳು ಇರುವುದಿಲ್ಲ.<br><br>ಇಂತಹ ಪ್ರಕರಣಗಳು ಕಂಡುಬಂದಲ್ಲಿ ಸದರಿ ಗೇಟುಗಳನ್ನು ತೆರವುಗೊಳಿಸಲು ಹಾಗೂ ಸಾರ್ವಜನಿಕರಿಗೆ ರಸ್ತೆಯನ್ನು ಮುಕ್ತಗೊಳಿಸಲು ಬಿಬಿಎಂಪಿ ವತಿಯಿಂದ ಅಗತ್ಯ ಕ್ರಮ ವಹಿಸಲಾಗುತ್ತದೆ. |

**ಸಂಖ್ಯೆ: ನಅಇ 76 ಎಂಎನ್‌ವೈ 2021 (ಇ)**

(signature)

**(ಬಿ.ಎಸ್. ಯಡಿಯೂರಪ್ಪ)**

ಮುಖ್ಯಮಂತ್ರಿ